# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ, ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗ ಮಹದೇವಪುರ ವಲಯ, ಬೆಂಗಳೂರು

ಸಂಖ್ಯೆ.ಬಿಬಿಎಂಪಿ/ಸ.ಕಾ.ಅ/ಹೆಚ್.ಎ.ಎಲ್/ಪಿಆರ್/ 22 /2022-23 ದಿನಾಂಕ: 14-06-2022

### 22ನೇ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

ಮಾನ್ಯ ಆಯುಕ್ತರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಾನ್ಯ ಆಯುಕ್ತರು ಕಛೇರಿ ಆದೇಶ ಸಂ: ಬಿ12(5)/ಪಿಆರ್/35/2020-21 ದಿನಾಂಕ:19/01/2022, ಆದೇಶದಂತೆ ದಿನಾಂಕ;24/02/2022 ರಂದು ನೋಡಲ್ ಅಧಿಕಾರಿ ಶ್ರೀ.ಶಿವಲಿಂಗಪ್ಪ ಸಾಹುಕಾರ್ , ಸಹಾಯಕ ಕಾರ್ಯಪಾಲಕ ಅಭಿಯಂತರು(ಕೆರೆಗಳು) , ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,ಇವರ ಅಧ್ಯಕ್ಷತೆಯಲ್ಲಿ ಹೆಚ್.ಎ.ಎಲ್ ಏರ್‌ಪೋರ್ಟ್ ಉಪವಿಭಾಗದ ವಾರ್ಡ್-56 ಎ.ನಾರಾಯಣಪುರದಲ್ಲಿ ದಿನಾಂಕ:14-06-2022ರಂದು ವಾರ್ಡ್ ಕಛೇರಿಯಲ್ಲಿ ವಾರ್ಡ್ ಸಮಿತಿ ನಡೆಸಿದ ಸಭೆಯ ನಡಾವಳಿಗಳು ಈ ಕೆಳಕಂಡಂತೆ ಇರುತ್ತದೆ.

**ಉಪಸ್ಥಿತರು:**

| ಕ್ರ.ಸಂ | ಹೆಸರು | ಹುದ್ದೆ |
|---|---|---|
| | | ಅಧಿಕಾರಿಗಳು |
| 1 | ಶ್ರೀ.ಶಿವಲಿಂಗಪ್ಪ ಸಾಹುಕಾರ್ | ವಾರ್ಡ್ ಸಮಿತಿ ಸಭೆಯ ನೋಡಲ್ ಅಧಿಕಾರಿ ವಾ.ನಂ.56, ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿಬಿಎಂಪಿ |
| 2 | ಶ್ರೀ.ಜಿ.ಡಿ.ಸೋಮಯ್ಯ | ವಾರ್ಡ್ ಸಮಿತಿಯ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು ವಾರ್ಡ್ ನಂ.56 ಎ.ನಾರಾಯಣಪುರ |
| 3 | ಶ್ರೀ.ಸುವರ್ಣ ಹೆಚ್.ಸಿ | ಕಿರಿಯ ಆರೋಗ್ಯ ನಿರೀಕ್ಷಕರು |
| 4 | ಶ್ರೀಮತಿ.ಡಾ॥ ರಚನ | ಆರೋಗ್ಯ ಅಧಿಕಾರಿ ವಾರ್ಡ್ ನಂ 56 ಪ್ರಾಥಮಿಕ ಆರೋಗ್ಯ ಕೇಂದ್ರ ಎ.ನಾರಾಯಣಪುರ |
| 5 | ಶ್ರೀ.ಡಾ॥ಲೋಕೇಶ್.ಎಸ್.ಪಿ | ಪಶು ವೈದ್ಯಕೀಯ ಅಧಿಕಾರಿಗಳು,ಕೆ.ಆರ್.ಪುರ |
| 6 | ಶ್ರೀ.ಅಶ್ವತ್‌ನಾರಾಯಣ್ | ಪಶು ವೈದ್ಯಕೀಯ ನಿರ್ವಾಹಕರು,ಕೆ.ಆರ್.ಪುರ |
| 7 | ಶ್ರೀ.ಹರ್ಷ.ಎಸ್ | ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಮಹದೇವಪುರ |
| 8 | ಶ್ರೀ.ಚಂದ್ರಪ್ಪ | ಪೊಲೀಸ್ ಸಬ್‌ಇನ್ಸ್‌ಪೆಕ್ಟರ್, ಕೆ.ಆರ್.ಪುರ |
| 9 | ಶ್ರೀ.ವೆಂಕಟರಮಣಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ |
| 10 | ಶ್ರೀ.ಕೃಷ್ಣಮೂರ್ತಿ.ಎನ್ | ಸಹಾಯಕ ಕಂದಾಯ ಅಧಿಕಾರಿ. ಹೆಚ್.ಎ.ಎಲ್ ಏರ್‌ಪೋರ್ಟ್ ಉಪ ವಿಭಾಗ |
| 11 | ಶ್ರೀ.ಹೆಚ್.ಆರ್.ರವಿ | ಕಂದಾಯ ಪರಿವೀಕ್ಷಕರು ವಾರ್ಡ್ ನಂ.56 |
| 12 | ಶ್ರೀ.ಅಭಿಲಾಷ್.ಪಿ | ಕಿರಿಯ ಅಭಿಯಂತರರು, (ಬೆಸ್ಕಾಂ) |
| 13 | ಶ್ರೀಮತಿ.ಹಿನಾ | ಕಿರಿಯ ಅಭಿಯಂತರರು, (ಬೆಸ್ಕಾಂ) |
| 14 | ಶ್ರೀಮತಿ.ಬೇಬಿ ಜಿ.ಆರ್ | ವಾರ್ಡ್ ಮಾರ್ಷಲ್ |
| | | ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು |
| 15 | ಶ್ರೀ.ಸುರೇಶ್ .ವಿ | ಎ-ನಾರಾಯಣಪುರ |
| 16 | ಶ್ರೀಮತಿ.ಮಂಗಳ | ಎ-ನಾರಾಯಣಪುರ |

| | | |
|---|---|---|
| 18 | ಶ್ರೀ.ಎ.ಗಣೇಶ್ | ಎ–ನಾರಾಯಣಪುರ |
| 19 | ಶ್ರೀ.ಪಿ.ಕೆ.ಗೌಡ | ಎ–ನಾರಾಯಣಪುರ |
| 20 | ಶ್ರೀ.ರಾಮುಲು | ಎ–ನಾರಾಯಣಪುರ |
| 21 | ಶ್ರೀ. ಪಿ.ಕೆ.ಉದಯ ಕುಮಾರ್ | ಎ–ನಾರಾಯಣಪುರ |
| 22 | ಶ್ರೀ. ಚಿಟ್ಟಿ | ಎ–ನಾರಾಯಣಪುರ |
| 23 | ಶ್ರೀ. ಶಂಕರ್ | ಎ–ನಾರಾಯಣಪುರ |
| 24 | ಶ್ರೀ.ಪ್ರದೀಪ್ ರೆಡ್ಡಿ | ಎ–ನಾರಾಯಣಪುರ |
| 25 | ಶ್ರೀ.ಮಂಜುನಾಥ್,ಕೆ | ಎ–ನಾರಾಯಣಪುರ |

<u>ನಡಾವಳಿ 1.</u> ಕೋವಿಡ್–19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಿಸಿದಂತೆ, ಸಾಂಬಾವ್ಯ ನಾಲ್ಕನೇ ಅಲೆಯನ್ನು ನಿಯಂತ್ರಿಸುವ ಬಗ್ಗೆ ಮತ್ತು ಸೊಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ.

ಈ ಕುರಿತು ಚರ್ಚಿಸಲಾಗಿ, ವಾರ್ಡ್‌ಗೆ ಸಂಬಂಧಿಸಿದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯ ಅಧಿಕಾರಿಗಳು ವಾರ್ಡ್‌ನಲ್ಲಿ ಕೋವಿಡ್–19ರ ಸಾಂಕ್ರಮಿಕ ರೋಗಕ್ಕೆ ಸಂಬಂಧಪಟ್ಟಂತೆ ಆರೋಗ್ಯ ಅಧಿಕಾರಿಗಳು ಕೋವಿಡ್ ಲಸಿಕೆಯನ್ನು 12 ರಿಂದ 14 ವರ್ಷದೊಳಗಿನ ಮಕ್ಕಳಿಗೆ ಎರಡನೇ ಡೋಸ್ ಲಸಿಕೆಯನ್ನು ನೀಡುತ್ತಿರುವುದಾಗಿ ಹಾಗೂ 60 ವರ್ಷ ಮೇಲ್ಪಟ್ಟವರಿಗೆ 80% ಬೂಸ್ಟರ್ ಡೋಸ್ ನೀಡಿರುವುದಾಗಿ ತಿಳಿಸಿದರು. ಈ ಬಗ್ಗೆ ಸೋಂಕು ಹರಡುವುದನ್ನು ತಡೆಗಟ್ಟುವ ಸಲುವಾಗಿ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ತೀರ್ಮಾನಿಸಿ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಮತ್ತು ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚಿಸಲಾಯಿತು.

ಕ್ರಮ: ಪ್ರಾಥಮಿಕ ಆರೋಗ್ಯ ಕೇಂದ್ರದ ಅಧಿಕಾರಿಗಳು

<u>ನಡಾವಳಿ 2.</u> ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗಳ ಸಂಬಂಧಿಸಿದ ವಿಷಯಗಳ ಬಗ್ಗೆ.

ವಾರ್ಡ್ ವ್ಯಾಪ್ತಿಯಲ್ಲಿ ನೀರಿನ ಸಮಸ್ಯೆ ಇರುವುದರಿಂದ ಬುಧುವಾರ ಮತ್ತು ಭಾನುವಾರ ವಾರ್ಡ್ ವ್ಯಾಪ್ತಿಯಲ್ಲಿ ನೀರು ಪೂರೈಸಬೇಕೆಂದು ಸಾರ್ವಜನಿಕರು ಮನವಿ ಮಾಡಿಕೊಂಡರು ಅದರಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಮಾತಾನಾಡಿ ಸಮಸ್ಯೆಯನ್ನು ಬಗೆಹರಿಸುವುದಾಗಿ ತಿಳಿಸಿದರು.

ಕ್ರಮ: ಬಿ.ಡಬ್ಲ್ಯೂ.ಎಸ್.ಎಸ್.ಬಿ ಸಹಾಯಕ ಅಭಿಯಂತರರು

<u>ನಡಾವಳಿ 3.</u> ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ .

ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ ಚರ್ಚಿಸಲಾಗಿದ್ದು, ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿಯನ್ನು ಸರಿಯಾಗಿ ನಿರ್ವಹಿಸುವಂತೆ ಸಂಬಂಧಪಟ್ಟ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಯಿತು.

ಕ್ರಮ: ಘನತ್ಯಾಜ್ಯ ನಿರ್ವಹಣ ವಿಭಾಗ

<u>ನಡಾವಳಿ 4.</u> ಕಂದಾಯ ಇಲಾಖೆಗೆ ಸಂಬಂದಿಸಿದ ವಿಷಯಗಳ ಬಗ್ಗೆ.

ಈ ಕುರಿತು ಚರ್ಚಿಸಲಾಗಿ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ಉದಯನಗರ ಮುಖ್ಯರಸ್ತೆಯ ಆರ್.ಆರ್. ಬೇಕರಿ ಬಳಿಯಲ್ಲಿರುವ ಮೋಹನ್ ಬಾರ್ ಮತ್ತು ರೆಸ್ಟೋರೆಂಟ್‌ನ ಸುತ್ತಾಮುತ್ತಾ ಶಾಲಾ ಮತ್ತು ವಸತಿ ಸಮುಚ್ಚಯಗಳು ಇರುವುದಿಂದ ಬಾರ್‌ನ್ನು ಆ ಜಾಗದಿಂದ ಸ್ಥಳಾಂತರ ಮಾಡಬೇಕೆಂದು ಸಾರ್ವಜನಿಕರು ಅಗ್ರಹಿಸಿರುತ್ತಾರೆ. ಆದ್ದರಿಂದ ಈ ಕೂಡಲೇ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಸಂಬಂಧಪಟ್ಟ ಸಹಾಯಕ ಕಂದಾಯ ಅಧಿಕಾರಿಗೆ ಸೂಚಿಸಲಾಯಿತು.

ಕ್ರಮ: ಕಂದಾಯ ಪರಿವೀಕ್ಷಕರು, ಕಂದಾಯ ಶಾಖೆ, ಎ.ನಾರಯಣಪುರ

ನಡಾವಳಿ 5.ಬೀದಿ ದೀಪಗಳ ನಿರ್ವಹಣೆ ಬಗ್ಗೆ.

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕಾವೇರಿ ಬೀದಿ ಮತ್ತು ಶಕ್ತಿನಗರದಲ್ಲಿ ವಿದ್ಯುತ್ ತಂತಿಗಳಿಗೆ ಮರದ ಕೊಂಬೆಗಳು ಬಾಗಿರುವುದಾಗಿ ಸಾರ್ವಜನಿಕರು ತಿಳಿಸಿದರುವ, ಅದರಂತೆ ಕೊಡಲೇ ಮರದ ಕೊಂಬೆಗಳನ್ನು ತೆಗೆಯ ಬೇಕೆಂದು ಸಭೆಯಲ್ಲಿ ಹಾಜರಿದ್ದ ಕಿರಿಯ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಬೆಸ್ಕಾಂ, ಇಲಾಖೆ ಎ.ನಾರಾಯಣಪುರ.

ನಡಾವಳಿ 6. ಪೊಲೀಸ್ ಇಲಾಖೆಗೆ ಸಂಬಂಧಿಸಿದ ವಿಷಯದ ಬಗ್ಗೆ.

ಈ ಕುರಿತು ಚರ್ಚಿಸಲಾಗಿ, ವಾರ್ಡ್ ವ್ಯಾಪ್ತಿಯಲ್ಲಿ ಬರುವ ವಿಜಯ ನಗರ ಕಾಲೋನಿ, ಬಜಾಜ್ ಬೀದಿ ಮತ್ತು ಉದಯನಗರ 1ನೇ ಮುಖ್ಯರಸ್ತೆಯಲ್ಲಿ ಪುಂಡು ಪೋಕರಿಗಳು ಗಾಂಜಾ ಸೇವಿಸುವುದಾಗಿ ಹಾಗೂ ಬೈಕ್ ವೀಲಿಂಗ್ ಮಾಡುತ್ತಿರುವುದಾಗಿ ಸಾರ್ವಜನಿಕರು ಅಗ್ರಹಿಸಿರುತ್ತಾರೆ, ಅದರಂತೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ಪೊಲೀಸ್ ಅದಿಕಾರಿಗೆ ಸೂಚಿಸಲಾಯಿತು .

ಕ್ರಮ: ಪೊಲೀಸ್ ಇಲಾಖೆ, ಮಹದೇವಪುರ

ನಡಾವಳಿ 6.ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ .

ವಾರ್ಡ್‌ನ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಚರ್ಚಿಸಲಾಗಿದ್ದು, ವಾರ್ಡ್ ವ್ಯಾಪ್ತಿಯ ಕೆಲವು ರಸ್ತೆಗಳಲ್ಲಿ ಹಾಗೂ ಉದಯಶಂಕರ್ ರಸ್ತೆಯ ಕಾಮಗಾರಿಯನ್ನು ಪ್ರಾರಂಭಿಸುವಂತೆ ಸಾರ್ವಜನಿಕರು ಒತ್ತಾಯಿಸಿದರು,ಅದರಂತೆ ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸುವಂತೆ ಸಂಬಂಧಪಟ್ಟ ವಾರ್ಡ್ ಅಭಿಯಂತರರಿಗೆ ಸೂಚಿಸಲಾಯಿತು.

ಕ್ರಮ: ಸಹಾಯಕ ಅಭಿಯಂತರರು ವಾರ್ಡ್ 56

14/6/22

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.56 ಎ.ನಾರಾಯಣಪುರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

14/06/2022

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು
ಸಹಾಯಕ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:-

1. ಮಾನ್ಯ ಜಂಟಿ ಆಯುಕ್ತರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
2. ಮುಖ್ಯ ಅಭಿಯಂತರರು, ಮಹದೇವಪುರ ವಲಯ ರವರ ಮಾಹಿತಿಗಾಗಿ ರವಾನಿಸಿದೆ.
3. ಕಛೇರಿ ಪ್ರತಿ.